# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | 301 |
| ಸದಸ್ಯರ ಹೆಸರು | ಶ್ರೀ ಎಸ್. ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | 07-07-2023 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರೈತರಿಗೆ ಸರ್ಕಾರದಿಂದ ಪ್ರಸ್ತುತ ಸಾಲಿನಲ್ಲಿ ವ್ಯವಸಾಯ ಮಾಡಲು ಬಿತ್ತನೆ ಬೀಜಗಳನ್ನು ಗ್ರಾಮೀಣ ಪ್ರದೇಶದ ರೈತರಿಗೆ ಸಮರ್ಪಕವಾಗಿ ವಿತರಣೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರೈತರಿಗೆ ಸರ್ಕಾರದಿಂದ ಪ್ರಸ್ತುತ ಸಾಲಿನಲ್ಲಿ ವ್ಯವಸಾಯ ಮಾಡಲು ಬಿತ್ತನೆ ಬೀಜಗಳನ್ನು ಗ್ರಾಮೀಣ ಪ್ರದೇಶದ ರೈತರಿಗೆ ಸಮರ್ಪಕವಾಗಿ ವಿತರಣೆ ಮಾಡಲು ಕ್ರಮ ಕೈಗೊಳ್ಳಲಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ವ್ಯವಸಾಯದ ಬಿತ್ತನೆ ಬೀಜಗಳನ್ನು ಎಲ್ಲಾ ರೈತರಿಗೆ ವಿತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ರೈತರಿಗೆ ಬೇಕಾಗಿರುವ ವಿವಿಧ ಬಿತ್ತನೆ ಬೀಜಗಳನ್ನು ಸಕಾಲದಲ್ಲಿ ರೈತರಿಗೆ ವಿತರಿಸಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.<br>• ರಾಜ್ಯದ ಎಲ್ಲಾ ವರ್ಗದ ರೈತರಿಗೆ ಗರಿಷ್ಠ 2 ಹೆಕ್ಟೇರ್ ಮಿತಿಯೊಳಗೆ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜಗಳನ್ನು ಸರಬರಾಜು ಮಾಡಲು "ಬಿತ್ತನೆ ಬೀಜಗಳ ಪೂರೈಕೆ" ಯೋಜನೆಯಡಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.<br>• ರಾಜ್ಯದ ರೈತರಿಗೆ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜಗಳನ್ನು ವಿತರಿಸುವ ಸಲುವಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಸಂಸ್ಥೆಗಳನ್ನು ಎಂಪ್ಯಾನಲ್ ಮಾಡಿ, ಬೇಡಿಕೆಯನ್ವಯ ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತಿದೆ.<br>• ರೈತರಿಗೆ ರಿಯಾಯಿತಿ ದರದಲ್ಲಿ ಇಲಾಖೆಯ ರೈತ ಸಂಪರ್ಕ ಕೇಂದ್ರಗಳು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹಾಗೂ ಗುರುತಿಸಿದ ಮಾರಾಟ ಕೇಂದ್ರಗಳ ಮುಖಾಂತರ ಸಕಾಲದಲ್ಲಿ ಬಿತ್ತನೆ ಬೀಜ ದೊರಕಿಸಲು ವ್ಯವಸ್ಥೆ ಮಾಡಲಾಗಿದೆ.<br>• ಪ್ರಸ್ತುತ ಸಾಲಿನಲ್ಲಿ ರೈತರಿಗೆ ಭತ್ತ, ರಾಗಿ, ಜೋಳ, ಸಜ್ಜೆ, ಮೆಕ್ಕೆಜೋಳ, ನವಣೆ, ಉದ್ದು, ಹೆಸರು, ಅಲಸಂದೆ, ತೊಗರಿ, ನೆಲಗಡಲೆ, ಸೋಯಾಅವರೆ ಮತ್ತು ಸೂರ್ಯಕಾಂತಿ ಬೆಳೆಗಳ ಬಿತ್ತನೆ ಬೀಜಗಳನ್ನು ರಿಯಾಯಿತಿ ದರದಲ್ಲಿ ವಿತರಣೆಗೆ ಕ್ರಮ ಕೈಗೊಳ್ಳಲಾಗಿರುತ್ತದೆ. |

| | | |
|---|---|---|
| | | • ರಾಜ್ಯ ಸರ್ಕಾರದ ಬೀಜಗಳ ಪೂರೈಕೆ ಯೋಜನೆಯಡಿ 2023-24ನೇ ಸಾಲಿಗೆ ರೂ.160.00ಕೋಟಿ ಅನುದಾನ ಒದಗಿಸಲಾಗಿರುತ್ತದೆ.<br>• 2023ರ ಮುಂಗಾರು ಹಂಗಾಮಿನಲ್ಲಿ 5.54 ಲಕ್ಷ ಕ್ವಿಂಟಾಲ್ ಬಿತ್ತನೆ ಬೀಜಗಳ ಬೇಡಿಕೆಯನ್ನು ಅಂದಾಜಿಸಲಾಗಿದ್ದು, ಇದುವರೆಗೂ ಒಟ್ಟು 1.80 ಲಕ್ಷ ಕ್ವಿಂಟಾಲ್ ಬಿತ್ತನೆ ಬೀಜಗಳನ್ನು ರಿಯಾಯಿತಿ ದರದಲ್ಲಿ ವಿತರಿಸಲಾಗಿದ್ದು ಬೀಜ ವಿತರಣೆ ಪ್ರಕ್ರಿಯೆ ಪ್ರಗತಿಯಲ್ಲಿದೆ. |
| ಇ) | ರೈತರಿಗೆ ನೀಡುತ್ತಿರುವ ಬಿತ್ತನೆ ಬೀಜಗಳ ಬೆಲೆಗಳು ಹೆಚ್ಚಾಗಿರುವುದರಿಂದ ರೈತರು ಬಹಳ ಸಂಕಷ್ಟದಲ್ಲಿ ಇರುವುದರಿಂದ ಬಿತ್ತನೆ ಬೀಜಗಳ ಬೆಲೆಯನ್ನು ಕಡಿಮೆ ಮಾಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ? | ರೈತರಿಗೆ ಇಲಾಖಾ ಕಾರ್ಯಕ್ರಮಗಳಡಿ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜಗಳನ್ನು ನೀಡುವ ಸಲುವಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>• ರಾಜ್ಯದ ಒಟ್ಟಾರೆ ಬಿತ್ತನೆ ಬೀಜದ ಬೇಡಿಕೆಗನುಗುಣವಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಕಾಯ್ದೆ (KTPP)-1999 ರನ್ವಯ ಹಂಗಾಮು ಪೂರ್ವದಲ್ಲಿ ಬೀಜ ಸರಬರಾಜುದಾರ ಸಂಸ್ಥೆಗಳನ್ನು ಎಂಪ್ಯಾನಲ್ ಮಾಡಲಾಗುತ್ತದೆ.<br>• ಸರ್ಕಾರದ ಆದೇಶದನ್ವಯ ರಚಿತವಾಗಿರುವ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರು, ಅನುವಂಶೀಯ ಮತ್ತು ಸಸ್ಯ ತಳಿ ಶಾಸ್ತ್ರ ವಿಭಾಗ, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು ಇವರ ಏಕ ಸದಸ್ಯ ತಾಂತ್ರಿಕ ಸಮಿತಿಯು ಪ್ರತಿ ಬೆಳೆ ಮತ್ತು ತಳಿಯ ಬಿತ್ತನೆ ಬೀಜಕ್ಕೆ, ಹಿಂದಿನ ಹಂಗಾಮಿನಲ್ಲಿ ನೀಡಲಾಗಿದ್ದ ಮಾರಾಟ ದರ, ಇದೇ ಬೆಳೆ ಮತ್ತು ತಳಿಯು ಮುಕ್ತ ಮಾರುಕಟ್ಟೆಯಲ್ಲಿ ಮಾರಾಟವಾಗುತ್ತಿರುವ ದರ, ಜೊತೆಗೆ ಸದರಿ ಬಿತ್ತನೆ ಬೀಜದ ಬೀಜೋತ್ಪಾದನೆಗೆ ತಗುಲಬಹುದಾದ ಖರ್ಚು ವೆಚ್ಚ, ಸಂಶೋಧನಾ ನಿರ್ದೇಶಕರು, ಕೃಷಿ ವಿಶ್ವ ವಿದ್ಯಾಲಯ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ನಿಗದಿಪಡಿಸಲಾದ ಬೆಳೆವಾರು ಖರೀದಿ ದರ, ಇತ್ಯಾದಿಗಳನ್ನು ತಾಂತ್ರಿಕವಾಗಿ ಪರಿಶೀಲಿಸಿ ಅಂತಿಮ ದರವನ್ನು ನಿಗಧಿಪಡಿಸಲಾಗುತ್ತದೆ.<br>• ರಾಜ್ಯದ ರೈತರಿಗೆ ಪ್ರತಿ ಹಂಗಾಮಿನಲ್ಲಿ ವಿವಿಧ ಬೆಳೆಗಳನ್ನು ಬೆಳೆವಾರು ನಿಗದಿಪಡಿಸಲಾದ ರಿಯಾಯಿತಿ ದರದಲ್ಲಿ ರೈತರ ವಂತಿಕೆಯನ್ನು ಪಡೆದು, ಕಡಿಮೆ ದರದಲ್ಲಿ ಇಲಾಖಾ ಕಾರ್ಯಕ್ರಮಗಳಡಿ ವಿತರಿಸಲಾಗುತ್ತದೆ. |

ಸಂಖ್ಯೆ: AGRI/92/ACT/2023

**(ಎನ್. ಚಲುವರಾಯಸ್ವಾಮಿ)**
ಕೃಷಿ ಸಚಿವರು